# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 858 |
| ಸದಸ್ಯರ ಹೆಸರು | ಶ್ರೀ ಪ್ರತಾಪ್ ಸಿಂಹ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 14-07-2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ 'ಸಾವಯವ ಕೃಷಿ'ಗೆ ಒಳಪಟ್ಟಿರುವ ಕೃಷಿ ಭೂಮಿಯ ವಿಸ್ತೀರ್ಣವೆಷ್ಟು; | ಕೃಷಿ ಮತ್ತು ಸಂಸ್ಕರಿತ ಆಹಾರ ಪದಾರ್ಥಗಳ ರಫ್ತು ಅಭಿವೃದ್ಧಿ ಪ್ರಾಧಿಕಾರ (Agricultural & Processed Food products Export Development Authority) ಅಂಕಿಅಂಶಗಳನ್ವಯ ರಾಜ್ಯದಲ್ಲಿ 2021-22ನೇ ಸಾಲಿಗೆ ಸಾವಯವ ಕೃಷಿಗೆ ಒಳಪಟ್ಟಿರುವ ಕೃಷಿ ಭೂಮಿಯ ಒಟ್ಟು ವಿಸ್ತೀರ್ಣ 96188.88 ಹೆಕ್ಟೇರ್. |
| ಆ) | 'ಸಾವಯವ ಕೃಷಿ' ಉತ್ತೇಜನಕ್ಕೆ ಸರ್ಕಾರ ರೂಪಿಸಿರುವ ಯೋಜನೆ ಮತ್ತು ಕಾರ್ಯಕ್ರಮಗಳೇನು; | 'ಸಾವಯವ ಕೃಷಿ' ಉತ್ತೇಜನಕ್ಕೆ ಇಲಾಖಾ ವತಿಯಿಂದ ಸರ್ಕಾರ ರೂಪಿಸಿರುವ ಯೋಜನೆಗಳು ಮತ್ತು ಕಾರ್ಯಕ್ರಮಗಳು ಈ ಕೆಳಕಂಡಂತಿವೆ;<br>**ಅ) ಸಾವಯವ ಕೃಷಿ ಅಳವಡಿಕೆ ಮತ್ತು ದೃಢೀಕರಣ:**<br>ಈ ಕಾರ್ಯಕ್ರಮದಡಿ ರಾಜ್ಯದ ಆಸಕ್ತ ಸಾವಯವ ರೈತ/ಗುಂಪುಗಳ ಕ್ಷೇತ್ರವನ್ನು ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣನ ಸಂಸ್ಥೆ (KSSOCA)ಯಡಿ ನೋಂದಾಯಿಸಿ ಸಾವಯವ ಪ್ರಮಾಣೀಕರಣದ ವ್ಯಾಪ್ತಿಗೆ ಒಳಪಡಿಸುವ ಸಂಬಂಧದ ವೆಚ್ಚವನ್ನು KSSOCA ಸಂಸ್ಥೆಯ ಮೂಲಕ ಭರಿಸಲಾಗುತ್ತಿದೆ.<br>**ಆ) ರೈತಸಿರಿ ಮತ್ತು ಸಿರಿಧಾನ್ಯ ಉತ್ತೇಜನ ಕಾರ್ಯಕ್ರಮಗಳು:**<br>ರಾಜ್ಯದ ಸಿರಿಧಾನ್ಯ ಕ್ಷೇತ್ರವನ್ನು ವಿಸ್ತರಿಸುವ ನಿಟ್ಟಿನಲ್ಲಿ ಪ್ರಮುಖ ಸಿರಿಧಾನ್ಯಗಳಾದ ಊದಲು, ನವಣೆ, ಹಾರಕ, ಕೊರಲೆ, ಸಾಮೆ ಮತ್ತು ಬರಗು ಬೆಳೆಗಳನ್ನು ಬೆಳೆಯುವ ರೈತರಿಗೆ ಬೆಳೆ ಸಮೀಕ್ಷೆ ಆಧಾರದ ಮೇರೆಗೆ ಪ್ರತಿ ಹೆಕ್ಟೇರ್ ಗೆ ರೂ. 10,000/- ಗಳಂತೆ ಗರಿಷ್ಠ 2 ಹೆಕ್ಟೇರ್ ಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.<br>ಸಿರಿಧಾನ್ಯಗಳ ಸಂಸ್ಕರಣೆಗೆ ಉತ್ತೇಜನ ನೀಡುವ ಉದ್ದೇಶದೊಂದಿಗೆ ಸಿರಿಧಾನ್ಯಗಳ ಸಂಸ್ಕರಣೆ, ಮೌಲ್ಯವರ್ಧನೆ, ವರ್ಗೀಕರಣ, ಪ್ಯಾಕಿಂಗ್ ಮತ್ತು ಬ್ರ್ಯಾಂಡಿಂಗ್ ಯಂತ್ರೋಪಕರಣಗಳಿಗೆ ಒಟ್ಟು ಯಂತ್ರೋಪಕರಣಗಳ ವೆಚ್ಚದ ಮೇಲೆ ಶೇ.50 ರಷ್ಟು ಅಥವಾ ಗರಿಷ್ಠ ರೂ. 10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡಲಾಗುತ್ತಿದೆ.<br>**ಇ) ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನ:**<br>ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಉಪಯುಕ್ತತೆಯ ಬಗ್ಗೆ ರೈತರಿಗೆ ಅರಿವು ಮೂಡಿಸುವ ಸಲುವಾಗಿ ಸಾವಯವ ಇಂಗಾಲ ಹೆಚ್ಚಿಸುವ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲು ಫಲಾನುಭವಿ |

| | | |
|---|---|---|
| | | ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.2500/-ಗಳನ್ನು(ಶೇ.100) ಮೀರದಂತೆ ಸಹಾಯಧನ ನೀಡಲಾಗುತ್ತಿದೆ. ಜೊತೆಗೆ ಹಸಿರೆಲೆ ಗೊಬ್ಬರ ಬಳಕೆಯನ್ನು ಪ್ರೋತ್ಸಾಹಿಸಲು ಎಲ್ಲಾ ವರ್ಗದ ರೈತರಿಗೆ ಶೇ.75ರ ರಿಯಾಯಿತಿ ದರದಲ್ಲಿ ಪ್ರಮುಖವಾಗಿ ಡಯಾಂಚಾ, ಸನ್ನೆಂಪ್ ಇತ್ಯಾದಿ ಹಸಿರೆಲೆ ಗೊಬ್ಬರ ಬೀಜಗಳನ್ನು ವಿತರಣೆ ಮಾಡಲಾಗುತ್ತಿದೆ.<br><br>**ಈ)ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳ ವಿತರಣಾ ಕಾರ್ಯಕ್ರಮ:**<br><br>ಜೈವಿಕ ಪೀಡೆನಾಶಕಗಳ ಬಳಕೆಯನ್ನು ಉತ್ತೇಜಿಸಲು ಹಾಗೂ ಸಾವಯವ ಕೃಷಿಯೆಡೆಗೆ ರೈತರನ್ನು ಕೊಂಡೊಯ್ಯುವ ಉದ್ದೇಶದಿಂದ ಇಲಾಖೆಯ ರೈತ ಸಂಪರ್ಕ ಕೇಂದ್ರಗಳ ಮೂಲಕ ಶೇ. 50 ರ ರಿಯಾಯಿತಿ ದರದಲ್ಲಿ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳನ್ನು ರೈತರಿಗೆ ವಿತರಿಸಲಾಗುತ್ತಿದೆ.<br><br>**ಉ) ಕೇಂದ್ರ ಪುರಸ್ಕೃತ - ಆಹಾರ ಮತ್ತು ಪೌಷ್ಠಿಕ ಭದ್ರತೆ (ಹಿಂದಿನ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ) ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಯೋಜನೆ:**<br><br>ಬೆಳೆವಾರು ಕಾರ್ಯಕ್ರಮಗಳಡಿ ಸಮಗ್ರ ಪೋಷಕಾಂಶ ನಿರ್ವಹಣೆ ಘಟಕಗಳಡಿ ಜೈವಿಕ ಗೊಬ್ಬರಗಳಾದ ರೈಜೋಬಿಯಂ/PSB ಮತ್ತು ಹಸಿರೆಲೆ ಬಿತ್ತನೆ ಬೀಜಗಳನ್ನು ಶೇ 50ರ ರಿಯಾಯಿತಿ ದರದಲ್ಲಿ ವಿತರಣೆಗೆ ಅವಕಾಶ ಕಲ್ಪಿಸಲಾಗಿದೆ. |
| ಇ) | 'ಸಾವಯವ ಕೃಷಿ' ಕೈಗೊಳ್ಳುತ್ತಿರುವ ರೈತರಿಗೆ ಸರ್ಕಾರದಿಂದ ದೊರೆಯುತ್ತಿರುವ ನೆರವು ಮತ್ತು ಸೌಲಭ್ಯಗಳು ಯಾವುವು; | ಸಾವಯವ ಕೃಷಿ ಕೈಗೊಳ್ಳುತ್ತಿರುವ ರೈತರಿಗೆ ಸರ್ಕಾರದಿಂದ ದೊರೆಯುತ್ತಿರುವ ನೆರವು ಮತ್ತು ಸೌಲಭ್ಯಗಳು ಕೆಳಕಂಡಂತಿವೆ;<br><br>• ಸಾವಯವ ಪ್ರಮಾಣೀಕರಣ ಕಾರ್ಯಕ್ರಮದಡಿ ಗುಂಪು ಪ್ರಸ್ತಾವನೆಗಳಿಗೆ ಹಾಗೂ ವ್ಯಕ್ತಿಗತ ಪ್ರಸ್ತಾವನೆಗಳಿಗೆ ಪ್ರಮಾಣೀಕರಣ ಶುಲ್ಕದ ಶೇ.90 ರಷ್ಟು ಸಹಾಯಧನವನ್ನು ನೀಡಲಾಗುತ್ತದೆ. ಗುಂಪು ಪ್ರಸ್ತಾವನೆಗಳ ಪ್ರಮಾಣೀಕರಣಕ್ಕೆ ರೂ.30000/- ಹಾಗು ವ್ಯಕ್ತಿಗತ ಪ್ರಸ್ತಾವನೆಗಳಿಗೆ ರೂ.5000/- ಶುಲ್ಕ ನಿಗದಿಪಡಿಸಲಾಗಿರುತ್ತದೆ.<br><br>• ರೈತಸಿರಿ ಯೋಜನೆಯಡಿ ಸಿರಿಧಾನ್ಯ ಬೆಳೆಗಾರರಿಗೆ ಪ್ರತಿ ಹೆಕ್ಟೇರ್‌ಗೆ ರೂ.10,000/- ಗಳಂತೆ ಪ್ರೋತ್ಸಾಹಧನವನ್ನು ನೀಡಲಾಗುತ್ತದೆ. ಸಿರಿಧಾನ್ಯಗಳ ಸಂಸ್ಕರಣಾ ಯಂತ್ರೋಪಕರಣಗಳಿಗೆ ಶೇ.50 ಅಥವಾ ಗರಿಷ್ಠ ರೂ. 10.00 ಲಕ್ಷಗಳವರೆಗೆ ಸಹಾಯಧನವನ್ನು ನೀಡಲಾಗುತ್ತದೆ.<br><br>• ಸಾವಯವ ಇಂಗಾಲ ಹೆಚ್ಚಿಸುವ ಅಭಿಯಾನದಡಿ ಮಣ್ಣಿನಲ್ಲಿ ಸಾವಯವ ಇಂಗಾಲ ಹೆಚ್ಚಿಸುವ ಉಪಯುಕ್ತತೆಯ ಬಗ್ಗೆ ರೈತರಿಗೆ ಅರಿವು ಮೂಡಿಸುವ ಸಲುವಾಗಿ ಸಾವಯವ ಇಂಗಾಲ ಹೆಚ್ಚಿಸುವ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸಲು ಫಲಾನುಭವಿ ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.2500/-ಗಳನ್ನು(ಶೇ.100) ಮೀರದಂತೆ ಸಹಾಯಧನ ನೀಡಲಾಗುತ್ತದೆ. ಜೊತೆಗೆ ಹಸಿರೆಲೆ ಗೊಬ್ಬರ ಬಳಕೆಯನ್ನು ಪ್ರೋತ್ಸಾಹಿಸಲು ಎಲ್ಲಾ ವರ್ಗದ ರೈತರಿಗೆ ಶೇ.75ರ<br>. ರಿಯಾಯಿತಿ ದರದಲ್ಲಿ ಪ್ರಮುಖವಾಗಿ ಡಯಾಂಚಾ, ಸನ್ನೆಂಪ್ ಇತ್ಯಾದಿ ಹಸಿರೆಲೆ ಗೊಬ್ಬರ ಬೀಜಗಳನ್ನು ವಿತರಣೆ ಮಾಡಲಾಗುತ್ತದೆ. |

| | | |
|---|---|---|
| | | • ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳ ವಿತರಣಾ ಕಾರ್ಯಕ್ರಮದಡಿ ಶೇ. 50ರ ರಿಯಾಯಿತಿ ದರದಲ್ಲಿ ಜೈವಿಕ ಪೀಡೆನಾಶಕ ಹಾಗೂ ಜೈವಿಕ ನಿಯಂತ್ರಣಾಕಾರಕಗಳನ್ನು ರೈತರಿಗೆ ವಿತರಿಸಲಾಗುತ್ತದೆ.<br><br>ಕೇಂದ್ರ ಪುರಸ್ಕೃತ - ಆಹಾರ ಮತ್ತು ಪೌಷ್ಠಿಕ ಭದ್ರತೆ (ಹಿಂದಿನ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ) ಮತ್ತು ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಯೋಜನೆಯಡಿ ಜೈವಿಕ ಗೊಬ್ಬರಗಳಾದ ರೈಜೋಬಿಯಂ/PSB ಮತ್ತು ಹಸಿರೆಲೆ ಬಿತ್ತನೆ ಬೀಜಗಳನ್ನು ಶೇ 50ರ ರಿಯಾಯಿತಿ ದರದಲ್ಲಿ ವಿತರಣೆಗೆ ಅವಕಾಶ ಕಲ್ಪಿಸಲಾಗಿದೆ. |
| ಈ) | ರೈತರು ಬೆಳೆಯುವ 'ಸಾವಯವ ಕೃಷಿ' ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಮತ್ತು ಒಳ್ಳೆಯ ಬೆಲೆ ದೊರೆಯುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸಾವಯವ ಕೃಷಿ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಮತ್ತು ಒಳ್ಳೆಯ ಬೆಲೆ ದೊರೆಯುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳು ಈ ಕೆಳಕಂಡಂತಿವೆ.<br><br>➢ ರಾಜ್ಯದ ಸಾವಯವ ಬೆಳೆಗಾರರು ಬೆಳೆದ ಉತ್ಪನ್ನಗಳ ಮಾರಾಟಕ್ಕೆ ಸೂಕ್ತ ಮಾರುಕಟ್ಟೆ ಹಾಗೂ ಉತ್ತಮ ಧಾರಣೆ ದೊರಕಿಸಿಕೊಡುವ ನಿಟ್ಟಿನಲ್ಲಿ ಸಾವಯವ ಕೃಷಿಕರ ಸಂಘಗಳನ್ನು ಒಗ್ಗೂಡಿಸಿ 15 ಪ್ರಾಂತೀಯ ಸಹಕಾರ ಸಾವಯವ ಕೃಷಿಕರ ಸಂಘಗಳ ಒಕ್ಕೂಟಗಳನ್ನು 2016-17 ನೇ ಸಾಲಿನಲ್ಲಿ ರಾಜ್ಯಾದ್ಯಂತ ರಚಿಸಲಾಗಿರುತ್ತದೆ.<br>➢ ರಾಜ್ಯದ ಸಾವಯವ ಮತ್ತು ಸಿರಿಧಾನ್ಯ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸಂಪರ್ಕ ಒದಗಿಸಿಕೊಡುವ ನಿಟ್ಟಿನಲ್ಲಿ ಹಾಗು ಗ್ರಾಹಕರಲ್ಲಿ /ಪಾಲುದಾರರಲ್ಲಿ ಅರಿವು ಮೂಡಿಸಲು ಸಾವಯವ ಮತ್ತು ಸಿರಿಧಾನ್ಯ ಕಾರ್ಯಾಗಾರ /ಮೇಳಗಳು / ವಸ್ತು ಪ್ರದರ್ಶನಗಳನ್ನು ಆಯೋಜಿಸಲಾಗಿದೆ.<br>➢ ಕೃಷಿ ವಿಶ್ವವಿದ್ಯಾನಿಲಯಗಳಲ್ಲಿ ಆಯೋಜಿಸಲಾಗುವ ಕೃಷಿ ಮೇಳಗಳಲ್ಲಿ ಸಾವಯವ ಸಿರಿಧಾನ್ಯ ಉತ್ಪನ್ನಗಳ ಪ್ರತ್ಯೇಕ ಪೆವಿಲಿಯನ್ನಳನ್ನು ಸ್ಥಾಪಿಸಲಾಗಿರುತ್ತದೆ. ಅಲ್ಲದೇ ಇತರ ರಾಜ್ಯಗಳಲ್ಲಿ ಆಯೋಜಿಸುವ ಮೇಳಗಳಲ್ಲಿ ಭಾಗವಹಿಸಲಾಗುತ್ತಿದೆ.<br>➢ ಬೆಂಗಳೂರಿನಲ್ಲಿ 2017 ರಲ್ಲಿ ರಾಷ್ಟ್ರ ಮಟ್ಟದ ಹಾಗೂ 2018, 2019 ಮತ್ತು 2023 ರಲ್ಲಿ ಅಂತರರಾಷ್ಟ್ರೀಯ ವಾಣಿಜ್ಯ ಮೇಳಗಳನ್ನು ಆಯೋಜಿಸಲಾಗಿದೆ.<br>➢ ಜಿಲ್ಲಾ ಮಟ್ಟದ ಸಾವಯವ ಮತ್ತು ಸಿರಿಧಾನ್ಯಗಳ ಮೇಳಗಳನ್ನು ಜಿಲ್ಲೆಗಳಲ್ಲಿ ಆಯೋಜಿಸಲಾಗಿರುತ್ತದೆ. |

**ಸಂಖ್ಯೆ: AGRI/109/ACT/2023**

13/7

**(ಎನ್. ಚಲುವರಾಯ ಸ್ವಾಮಿ)**
ಕೃಷಿ ಸಚಿವರು